# ಕರ್ನಾಟಕ ವಿಧಾನ ಪರಿಷತ್

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | 1361 |
| **ಸದಸ್ಯರ ಹೆಸರು** | ಶ್ರೀ ವಿಜಯ್ ಸಿಂಗ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | 24.12.2021 |

| ಕ್ರಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆ ಬಸವ ಕಲ್ಯಾಣ ಹಾಗೂ ಹುಲಸೂರು ತಾಲ್ಲೂಕಿನ ಗ್ರಾಮಗಳಲ್ಲಿ ರಸ್ತೆ ಮತ್ತು ಕುಡಿಯುವ ನೀರಿನ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>• 2018-19ನೇ ಸಾಲಿನಲ್ಲಿ 3054 ಲಮ್‌ಸಮ್ ಯೋಜನೆಯಡಿ ಒಟ್ಟು 10 ಕಾಮಗಾರಿಗಳು ಮತ್ತು 5054 ಯೋಜನೆಯಡಿ 13 ಕಾಮಗಾರಿಗಳು ಬಸವಕಲ್ಯಾಣ ಹಾಗೂ ಹುಲಸೂರ ತಾಲ್ಲೂಕಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಕಾಮಗಾರಿವಾರು ವಿವರಗಳನ್ನು **ಅನುಬಂಧ 1 & 2 ರಲ್ಲಿ** ನೀಡಿದೆ.<br>• 2021-22 ನೇ ಸಾಲಿನ ಲೆ.ಶೀ. 5054 ರಡಿ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 25.00 ಕೋಟಿಗಳ ಮೊತ್ತದಲ್ಲಿ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಲು ಅನುಮೋದನೆ ನೀಡಿದೆ.<br>ವಿವರಗಳನ್ನು **ಅನುಬಂಧ-3 ರಲ್ಲಿ** ಲಗತ್ತಿಸಿದೆ.<br>• ಕುಡಿಯುವ ನೀರಿನ ಸೌಲಭ್ಯಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ಬಸವಕಲ್ಯಾಣ ಹಾಗೂ ಹುಲಸೂರು ತಾಲ್ಲೂಕಿನ ಜನವಸತಿಗಳಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿಗಳನ್ನು ನಿರ್ವಹಿಸಿ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. |

<table>
<tr>
<td>ಆ.</td>
<td>ರಸ್ತೆ ಅಭಿವೃದ್ಧಿ ಹಾಗೂ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು?</td>
<td>ಬಸವಕಲ್ಯಾಣ ತಾಲ್ಲೂಕಿಗೆ ರಸ್ತೆ ಅಭಿವೃದ್ಧಿ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಪ್ರಸಕ್ತ ಸಾಲಿನೊಂದಿಗೆ ಕಳೆದ ಎರಡು ವರ್ಷಗಳಲ್ಲಿ ಕೆಳಕಂಡಂತೆ ಅನುದಾನವನ್ನು ಒದಗಿಸಲಾಗಿರುತ್ತದೆ.
<table>
<tr><th colspan="3">ರಸ್ತೆ ಅಭಿವೃದ್ಧಿ</th></tr>
<tr><th>ಕ್ರ. ಸಂ.</th><th>ವರ್ಷ</th><th>ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>01</td><td>2019-20</td><td>63.00</td></tr>
<tr><td>02</td><td>2020-21</td><td>53.34</td></tr>
<tr><td>02</td><td>2021-22</td><td>2500.00</td></tr>
<tr><td colspan="2">ಒಟ್ಟು</td><td>2616.34</td></tr>
<tr><th colspan="3">ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ</th></tr>
<tr><td>01</td><td>2019-20</td><td>1847.05</td></tr>
<tr><td>02</td><td>2020-21</td><td>6787.26</td></tr>
<tr><td>03</td><td>2021-22</td><td>5630.80</td></tr>
<tr><td colspan="2">ಒಟ್ಟು</td><td>14265.11</td></tr>
</table>
</td>
</tr>
</table>

ಸಂಖ್ಯೆ: ಗ್ರಾಅಪ:15ನೇವಿಸ:136:ಆರ್.ಆರ್.ಸಿ:2021

**(ಕೆ.ಎಸ್.ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು